**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

ದಿನಾಂಕಃ 17 ನೇ ಫೆಬ್ರವರಿ ತಿಂಗಳು 2026ರಂದು

**ಸಿಸಿ ನಂ.1046/2025**

**ಫಿರ್ಯಾದುದಾರರುಃ** ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

– ವಿರುದ್ಧ –

**ಆರೋಪಿಃ** ಮೊಹಮ್ಮದ್ ಹುಸೇನ್.

**ಶ್ರೀಮತಿ ಅನಿತ, ಬಿ.ಎ.(ಲಾ), ಎಲ್.ಎಲ್.ಬಿ., ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹುಣಸೂರು ಆದ ನಾನು ಈ ಕೆಳಗೆ ಕಾಣಿಸಿರುವಃ**

ಮೊಹಮ್ಮದ್ ಹುಸೇನ್, ಬಿನ್ ಮೊಹಮ್ಮದ್ ಅಬ್ಬಾಸ್,
32 ವರ್ಷ, ಕಾರ್ಮಿಕ, ವಾಸಃ ಕಟ್ಟೆಮಳಲವಾಡಿ
ಗ್ರಾಮ, ಹುಣಸೂರು ತಾಲ್ಲೂಕು.

**ದೋಷಾರೋಪಣೆ**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 22.08.2025ರಂದು ಸಂಜೆ 5.45 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ಸರಹದ್ದು ಹುಣಸೂರು ಪಟ್ಟಣದ ಶಬ್ಬೀರ್ ನಗರದಲ್ಲಿರುವ ಶಾಹಿ ಮಸೀದಿ ಪಕ್ಕದಲ್ಲಿ ರಜಾಕ್ ಮೊಹಲ್ಲಾ ಗೆ ಹಾದಿರುವ ರಸ್ತೆಯಲ್ಲಿ ದಕ್ಷಿಣ ಅಂಚಿನಲ್ಲಿ ಚಾಸಾ.2ಮೊಹಮ್ಮದ್ ರನೀಮ್ ರವರು ರಜಾಕ್ ಮೊಹಲ್ಲಾದ ಅವರ ಮನೆಯಿಂದ ಶಾಹಿ ಮಸೀದಿ ಕಡೆಗೆ ನಡೆದುಕೊಂಡು ಬರುತ್ತಿರುವಾಗ ಆರೋಪಿಯಾದ ನೀವು ನಿಮ್ಮ ಕೆಎ–45/ಇಇ–6382 ಹೀರೊ ಸ್ಪ್ಲೆಂಡರ್ ಪ್ಲಸ್ ಬೈಕ್ ನ್ನು ರಜಾಕ್ ಮೊಹಲ್ಲಾದ ಕಡೆಯಿಂದ ಮಸೀದಿ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿರುತ್ತೀರಿ

ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ.2ರವರಿಗೆ ಹಿಂದಿನಿಂದ ಡಿಕ್ಕಿ ಮಾಡಿದ ಪರಿಣಾಮ ಅವರ ತಲೆಯ ಒಳಗೆ ಮತ್ತು ತಲೆಯ ಬಲಭಾಗಕ್ಕೆ ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ.2ರವರಿಗೆ ಹಿಂದಿನಿಂದ ಡಿಕ್ಕಿ ಮಾಡಿದ ಪರಿಣಾಮ ಅವರ ಬಲ ಕೈಗೆ ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

ANITHA

Digitally signed by ANITHA
Date: 2026.02.17 17:59:38 +0530

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.1046/2025**

**ಆರೋಪಿ ನಂ.1**

| | | |
|---|---|---|
| ಆಪಾದಿತನ ಹೆಸರು | : | ಮೊಹಮ್ಮದ್ ಹುಸೇನ್, |
| ತಂದೆಯ ಹೆಸರು | : | ಮೊಹಮ್ಮದ್ ಅಬ್ಬಾಸ್,, |
| ವಯಸ್ಸು | : | 32 ವರ್ಷ, |
| ಉದ್ಯೋಗ | : | ಕಾರ್ಮಿಕ |
| ವಾಸಸ್ಥಳ | : | ಕಟ್ಟೆಮಳಲವಾಡಿ ಗ್ರಾಮ, ಹುಣಸೂರು ತಾಲ್ಲೂಕು., |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 234ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಒಪ್ಪಿಕೊಳ್ಳುತ್ತೇನೆ. |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 17.02.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

ANITHA Digitally signed by ANITHA Date: 2026.02.17 17:59:44 +0530

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

**ಆರೋಪಿಯ ಸಹಿಃ**